# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್.ಎಸ್.ಎಲ್.ಸಿ. ನಂತರದ ವಿದ್ಯಾರ್ಹತೆ ಹೊಂದಿರುವ ನಿರುದ್ಯೋಗಿ ವಿಕಲಚೇತನರಿಗೆ ನಿರುದ್ಯೋಗ ಭತ್ಯೆಯನ್ನು ನೀಡುವ ಬಗ್ಗೆ..

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಇವರ ಪತ್ರ ಸಂಖ್ಯೆ: ವಿಹಿನಾಸಇ/ಯೋ.ಶಾ/ಹೊಸ ಯೋಜನೆ/ಭತ್ಯೆ/20/2014-15/1350, ದಿನಾಂಕ: 4.7.2014.

ಪ್ರಸ್ತಾವನೆ:

ಎಸ್.ಎಸ್.ಎಲ್.ಸಿ. ನಂತರದ ವಿದ್ಯಾರ್ಹತೆ ಹೊಂದಿರುವ ಸುಮಾರು ಐದು ಸಾವಿರ ನಿರುದ್ಯೋಗಿ ವಿಕಲಚೇತನರಿಗೆ ಪ್ರತಿ ತಿಂಗಳು ಒಂದು ಸಾವಿರ ರೂಪಾಯಿಗಳಂತೆ ನಿರುದ್ಯೋಗ ಭತ್ಯೆ ನೀಡಲು ರೂ.16.00ಕೋಟಿಗಳನ್ನು ಒದಗಿಸಲಾಗುವುದೆಂದು ಮಾನ್ಯ ಮುಖ್ಯಮಂತ್ರಿಯವರು 2014-15ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುತ್ತಾರೆ.

ರಾಜ್ಯದ ವಿವಿಧ ಜಿಲ್ಲೆಗಳ ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ನೋಂದಾಯಿಸಿರುವ 20ರಿಂದ 45ರ ವಯೋಮಾನದ ಒಟ್ಟು 10482 ನಿರುದ್ಯೋಗಿ ವಿಕಲಚೇತನರಿದ್ದು, ಎಸ್.ಎಸ್.ಎಲ್.ಸಿ. ವ್ಯಾಸಂಗ ಮಾಡಿದವರಿಗೆ ರೂ.300/-ರಂತೆ, ಪಿ.ಯು.ಸಿ. ಹಾಗೂ ತತ್ಸಮಾನ ಹೊಂದಿದವರಿಗೆ ರೂ.400/-ರಂತೆ ಹಾಗೂ ಪದವಿ ಮತ್ತು ತತ್ಸಮಾನ ನಂತರ ವಿದ್ಯಾರ್ಹತೆ ಹೊಂದಿದವರಿಗೆ ರೂ.500/-ರಂತೆ ನಿರುದ್ಯೋಗ ಭತ್ಯೆಯನ್ನು ನೀಡಬಹುದಾಗಿದ್ದು, 2014-15ನೇ ಸಾಲಿನ ಅಂಗವಿಕಲರ ಉದ್ಯೋಗ ಕೋಶ ಯೋಜನೆಯ ಲೆಕ್ಕಶೀರ್ಷಿಕೆ 2235-02-101-0-55 ಯೋಜನೆ ಉಪ ಲೆಕ್ಕಶೀರ್ಷಿಕೆ 059 ಇತರೆ ವೆಚ್ಚಗಳಡಿಯಲ್ಲಿ ನಿರುದ್ಯೋಗ ಭತ್ಯೆ ನೀಡಲು ಒದಗಿಸಿರುವ ರೂ.216.00 ಲಕ್ಷಗಳ ಅನುದಾನದಲ್ಲಿ ಅನುಷ್ಠಾನಗೊಳಿಸಬಹುದಾಗಿದೆಂದು ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯವರು ಮೇಲೆ ಓದಲಾದ ದಿನಾಂಕ:4.7.2014ರ ಪತ್ರದಲ್ಲಿ ಪ್ರಸ್ತಾಪಿಸಿರುತ್ತಾರೆ ಹಾಗೂ ಈ ಯೋಜನೆಯನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯದ ಮೂಲಕ ಅನುಷ್ಠಾನಗೊಳಿಸಲು ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 112 ಪಿಎಚ್‌ಪಿ 2014, ಬೆಂಗಳೂರು, ದಿನಾಂಕ: 28.10.2014.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ, ಎಸ್.ಎಸ್.ಎಲ್.ಸಿ ನಂತರದ ವಿದ್ಯಾರ್ಹತೆ ಹೊಂದಿರುವ ನಿರುದ್ಯೋಗಿ ವಿಕಲಚೇತನರಿಗೆ ಪ್ರತಿ ತಿಂಗಳು ರೂ.500/- ಗಳಂತೆ ನಿರುದ್ಯೋಗಿ ಭತ್ಯೆಯನ್ನು ನೀಡಲು ಸರ್ಕಾರವು ಈ ಮೂಲಕ ಮಂಜೂರಾತಿ ನೀಡಿದೆ.

ಈ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶಿರ್ಷಿಕೆ:2235-02-101-0-55-059(ಯೋಜನೆ) ಯಡಿಯಲ್ಲಿ ಒದಗಿಸಿರುವ ಅನುದಾನದಲ್ಲಿ ಭರಿಸತಕ್ಕದ್ದು.

ಈ ಯೋಜನೆಯನ್ನು ಸಾಮಾಜಿಕ ಭದ್ರತೆ ಮತ್ತು ಪಿಂಚಣಿ ನಿರ್ದೇಶನಾಲಯದ ಮೂಲಕ ಅನುಷ್ಠಾನಗೊಳಿಸತಕ್ಕದ್ದು.

30/10/14

ಈ ನಿರುದ್ಯೋಗ ಭತ್ಯೆ ಯೋಜನೆಯನ್ನು ಈ ಆದೇಶಕ್ಕೆ ಲಗತ್ತಿಸಿರುವ ಮಾರ್ಗಸೂಚಿಗಳ ಪ್ರಕಾರ ಅನುಷ್ಠಾನಗೊಳಿಸುವುದು.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆ, ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ ಆಇ 614 ವೆಚ್ಚ-3/2014, ದಿನಾಂಕ: 06.8.2014 ಹಾಗೂ ಪಿಡಿ 45 ಐಎಂಎಂ 2014, ದಿನಾಂಕ: 03.9.2014 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ

ಇವರಿಗೆ:-

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
3. ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
6. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
7. ಆಂತರಿಕ ಆರ್ಥಿಕ ಸಲಹೆಗಾರರು,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ - 3 & 9).
9. ನಿರ್ದೇಶಕರು, ಯೋಜನಾ ಇಲಾಖೆ (ಪಿ.ಎಂ.ಐ. ವಿಭಾಗ).
10. ಎಲ್ಲಾ ಜಿಲ್ಲೆಯ ಉಪ ನಿರ್ದೇಶಕರು/ ಸಹಾಯಕ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
11. ಎಲ್ಲಾ ಜಿಲ್ಲೆಯ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಪ ನಿರ್ದೇಶಕರ ಕಛೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ (ನಿರ್ದೇಶಕರ ಮುಖಾಂತರ).
12. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.

## ಸರ್ಕಾರದ ಆದೇಶ ಸಂಖ್ಯೆ: ಮಮಇ 112 ಪಿಎಚ್‌ಪಿ 2014, ದಿನಾಂಕ: 28.10.2014 ರಂತೆ ನಿರುದ್ಯೋಗಿ ವಿಕಲಚೇತನರಿಗೆ ನಿರುದ್ಯೋಗ ಭತ್ಯೆ ನೀಡುವ ಸಂಬಂಧ ಅನುಸರಿಸಬೇಕಾದ ಮಾರ್ಗಸೂಚಿಗಳು

1. ಸದರಿ ಯೋಜನೆ ಅಡಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳು ಸರ್ಕಾರದ ಇತರೆ ಯಾವುದೇ ಯೋಜನೆಯ ಅಡಿಯಲ್ಲಿ ಸೌಲಭ್ಯವನ್ನು ಪಡಯುತ್ತಿಲ್ಲವೆಂಬುದನ್ನು ಧೃಡಪಡಿಸಿಕೊಳ್ಳುವುದು.
2. ಶೇ.40 ಹಾಗೂ ಅದಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಎಲ್ಲಾ ವಿಕಲಚೇತನರು ಮಾತ್ರ ಸದರಿ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ
3. ನಿರುದ್ಯೋಗ ಭತ್ಯೆ ಪಡೆಯಲು 25ರಿಂದ 45ರ ವಯೋಮಿತಿಯೊಳಗಿರತಕ್ಕದ್ದು.
4. ವಿಕಲಚೇತನ ವ್ಯಕ್ತಿಗಳು ಭಾರತ ಪ್ರಜೆಯಾಗಿರಬೇಕು. ಹಾಗೂ ಇವರು ಕರ್ನಾಟಕದಲ್ಲಿ ಕನಿಷ್ಠ ಹಿಂದಿನ 10 ವರ್ಷಗಳು ವಾಸವಾಗಿರಬೇಕು.
5. ವಿಕಲಚೇತನರು 2 ವರ್ಷಗಳಿಗೂ ಹೆಚ್ಚಿನ ಅವಧಿಯಿಂದ ವಿಶೇಷ ಉದ್ಯೋಗ ವಿನಿಮಯ ಕೇಂದ್ರ/ಉದ್ಯೋಗ ವಿನಿಮಯ ಕೇಂದ್ರಗಳಲ್ಲಿ ಹೆಸರನ್ನು ನೋಂದಾಯಿಸಿಕೊಂಡಿದ್ದು..... ನಿರುದ್ಯೋಗಿಯಾಗಿರತಕ್ಕದ್ದು.
6. ವಿಕಲಚೇತನ ವ್ಯಕ್ತಿಗಳು ಯಾವುದೇ ಲಾಭದಾಯಕ ಉದ್ಯೋಗದಲ್ಲಿರತಕ್ಕದ್ದಲ್ಲ.
7. ಸಾಮಾಜಿಕ ಭದ್ರತೆ ಯೋಜನೆಯಡಿ ಮಾಸಿಕ ಪೋಷಣಾ ಭತ್ಯೆ ಪಡೆಯುತ್ತಿರುವ ವಿಕಲಚೇತನರು ಈ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ.
8. ಈ ಸೌಲಭ್ಯ ಪಡೆಯಲು ಯಾವುದೇ ಆದಾಯಮಿತಿ ಇರುವುದಿಲ್ಲ.
9. ಈ ಯೋಜನೆ ಸೌಲಭ್ಯ ಪಡೆಯಲು ಅರ್ಜಿದಾರರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ.
10. ಸದರಿ ಯೋಜನೆಯನ್ನು ಸಾಮಾಜಿಕ ಭದ್ರತೆ ಹಾಗೂ ಪಿಂಚಣಿ ನಿರ್ದೇಶನಾಲಯದ ಮೂಲಕ (ಕಂದಾಯ ಇಲಾಖೆ) ಅನುಷ್ಠಾನಗೊಳಿಸಬೇಕಾಗಿದ್ದು, ಆಯಾ ತಾಲ್ಲೂಕಿನ ತಹಸೀಲ್ದಾರರು ಮಂಜೂರಾತಿ ನೀಡಬೇಕಾಗಿರುತ್ತದೆ.
11. ನಿರುದ್ಯೋಗ ಭತ್ಯೆ ಸೌಲಭ್ಯ ಪಡೆಯುವ ಫಲಾನುಭವಿಗಳು ವಿದ್ಯಾರ್ಹತೆ ಹೊಂದಿರುವ ಅಂಕ ಪಟ್ಟಿಗಳ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
12. ಯಾವುದೇ ಉದ್ಯೋಗ (ಸ್ವಉದ್ಯೋಗ ಒಳಗೊಂಡಂತೆ) ದೊರೆಯದೇ ಇರುವ ಪತ್ರದ ದೃಡೀಕರಣವನ್ನು ಸ್ಥಳೀಯ ಪತ್ರಾಂಕಿತ ಅಧಿಕಾರಿಗಳಿಂದ ಪಡೆದು ಸಲ್ಲಿಸತಕ್ಕದ್ದು.
13. ವಿದ್ಯಾರ್ಥಿವೇತನ /ಶಿಕ್ಷಣ ಶುಲ್ಕ ಮರುಪಾವತಿ ಯೋಜನೆಯಡಿಯಲ್ಲಿ ಉಪಯೋಗ ಪಡೆಯುತ್ತಿರುವ ಅಭ್ಯರ್ಥಿಗಳು ಈ ಯೋಜನೆಗೆ ಒಳಪಡಲು ಅರ್ಹರಿರುವುದಿಲ್ಲ.
14. ಸುಳ್ಳು ಮಾಹಿತಿ/ ದಾಖಲೆ ನೀಡಿ ಸೌಲಭ್ಯ ಪಡೆಯುವ ಹಾಗೂ ಉದ್ಯೋಗ (ಸ್ವ ಉದ್ಯೋಗ ಒಳಗೊಂಡಂತೆ) ದೊರಕಿದ ನಂತರವು ಲಿಖಿತ ಮಾಹಿತಿ ನೀಡದೇ ಉದ್ಯೋಗ ಭತ್ಯೆ ಪಡೆಯುವುದು ಕ್ರಿಮಿನಲ್ ಅಪರಾಧವಾಗಿದ್ದು ಅಂತಹವರ ವಿರುದ್ಧ ಕ್ರಿಮಿನಲ್ ಕ್ರಮ ವಹಿಸುವುದಲ್ಲದೆ ದುರುಪಯೋಗ ಪಡಿಸಿಕೊಂಡ ಹಣವನ್ನು ವಾರ್ಷಿಕ ಶೇಕಡ 18% ಬಡ್ಡಿಯೊಂದಿಗೆ ವಸೂಲಿ ಮಾಡಲು ಕ್ರಮ ವಹಿಸಲಾಗುವುದು.
15. ಉದ್ಯೋಗ ದೊರಕಿದ ಕೂಡಲೇ ಈ ಯೋಜನೆಯಡಿ ಪ್ರಯೋಜನ ಪಡೆಯಲು ಅವಕಾಶವಿರುವುದಿಲ್ಲ ಹಾಗೂ ಲಿಖಿತವಾಗಿ ಮಂಜೂರಾತಿ ಪ್ರಾಧಿಕಾರ ಹಾಗೂ ಉದ್ಯೋಗ ವಿನಿಮಯ ಕೇಂದ್ರಕ್ಕೆ ತಿಳಿಸತಕ್ಕದ್ದು.
16. ಉದ್ಯೋಗ ದೊರತ ನಂತರ ಕರ್ತವ್ಯಕ್ಕೆ ಹಾಜರಾಗುವ ಮುನ್ನ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳಿಂದ ಈ ಯೋಜನೆಯಿಂದ ಪ್ರಯೋಜನ ಪಡೆಯಾವುತ್ತಿಲ್ಲವೆಂಬ ಬಗ್ಗೆ ದೃಡೀಕರಣ ಸಲ್ಲಿಸಬೇಕಾಗುತ್ತದೆ.

(ಲಲಿತ)
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ.
ಹಾಗೂ ವಿಕಲಚೇತನರ ಮತ್ತು ಹಿರಿಯ
ನಾಗರಿಕರ ಸಬಲೀಕರಣ ಇಲಾಖೆ